ಅಧ್ಯಕ್ಷರು : ಮಂಡಿಸಲಾಯಿತು.

ಅನುಬಂಧ – V & VI

4. ಅರ್ಜಿಯನ್ನೊಪ್ಪಿಸುವುದು :

ಶ್ರೀ ಎನ್. ಯೋಗೀಶ್‌ಭಟ್ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) : ಮಾನ್ಯ ಅಧ್ಯಕ್ಷರೆ, ಕುದುರೆಮುಖದ ಕಬ್ಬಿಣದ ಅದಿರು ಮತ್ತು ಇತರ ವಸ್ತುಗಳು ಲಕ್ಯಾ ಡ್ಯಾಂ, ಕುದುರೆಮುಖ ಇಲ್ಲಿ ಸಂಗ್ರಹವಾಗಿರುವ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ಅರ್ಜಿಯನ್ನೊಪ್ಪಿಸಲಾಯಿತು.

(ಕಾಂಗ್ರೆಸ್ ಮತ್ತು ಜೆ.ಡಿ.(ಎಸ್) ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ಧರಣಿನಿರತರಾಗಿದ್ದರು)

5. ಶಾಸನ ರಚನೆ :

ವಿಧೇಯಕಗಳನ್ನು ಮಂಡಿಸುವುದು

(1) ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ)(ತಿದ್ದುಪಡಿ) ವಿಧೇಯಕ, 2011

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2011ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ)(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು